# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೈಸೂರು ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಜಿಲ್ಲೆಗೊಂದಂತೆ ವೃದ್ಧಾಶ್ರಮವನ್ನು ತೆರೆಯಲು ಸೂಚಿಸಿದ್ದು ಅದರಂತೆ ಮೈಸೂರು ಜಿಲ್ಲೆ ಕೆ.ಆರ್.ನಗರದಲ್ಲಿ ಪ್ರಾರಂಭಿಸಲಾಗಿರುವ ವೃದ್ಧಾಶ್ರಮ ನಿರ್ವಹಣೆಗಾಗಿ ಹೆಚ್ಚುವರಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ವೆಚ್ಚ 10 ಶಾಖೆಯ ಕಡತ ಸಂಖ್ಯೆ: ಆಇ 5 ವೆಚ್ಚ 10/2020 (ಇ)

**ಪ್ರಸ್ತಾವನೆ:**

ಸರ್ಕಾರದ ಆದೇಶದನ್ವಯ ಜಿಲ್ಲೆಗೊಂದರಂತೆ ವೃದ್ಧಾಶ್ರಾಮವನ್ನು ವಾರ್ಷಿಕ ರೂ.8.00ಲಕ್ಷಗಳ ವೆಚ್ಚದಡಿ ಪ್ರಾರಂಭಿಸಲು ಅನುಮೋದಿಸಿದ್ದು ಅದರಂತೆ ಮೈಸೂರು ಜಿಲ್ಲೆಗೆ ಕಾರ್ಯಕ್ರಮದ ಲೆಕ್ಕ ಶಿರ್ಷಿಕೆ 2235–00–101–0–30–103ರಡಿ ರೂ.8.00ಲಕ್ಷಗಳನ್ನು 2020–21ರಲ್ಲಿ ಒದಗಿಸಿ ಬಿಡುಗಡೆಗೊಳಿಸಲಾಗಿದೆ. ಆದೇಶ ಸಂಖ್ಯೆ: ಮ.ಮ.ಇ.123 ಪಿ.ಹೆಚ್.ಪಿ. 2019 ದಿನಾಂಕ:26.11.2019ರನ್ವಯ ಮೈಸೂರು ಜಿಲ್ಲೆ ಕೆ.ಆರ್.ನಗರ ತಾಲ್ಲೂಕನಲ್ಲಿ ಮಾತೃಶ್ರೀ ವಿದ್ಯಾ ಶಿಕ್ಷಣ ಸಂಸ್ಥೆ(ರಿ) ವತಿಯಿಂದ ವೃದ್ಧಾಶ್ರಮವನ್ನು ತೆರೆಯಲು ಅನುಮೋದಿಸಿದ್ದು ಅದರಂತೆ ವೃದ್ಧಾಶ್ರಮ ಕಾರ್ಯ ನಿರ್ವಹಿಸುತ್ತಿರುತ್ತದೆ.

ಸದರಿ ಸಂಸ್ಥೆಗೆ 2019–20ರಲ್ಲಿ ಒದಗಿಸಬೇಕಾದ ಅನುದಾನ ರೂ.8.00ಲಕ್ಷಗಳನ್ನು ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಿದೆ. ಆದರೆ ಸದರಿ ವೃದ್ಧಾಶ್ರಮವನ್ನು ಪ್ರಾರಂಭಿಸಲು ನವಂಬರ್ 2019ರಲ್ಲಿ ಅನುಮೋದಿಸಿರುವುದರಿಂದ ನವಂಬರ್ 2019 ರಿಂದ ಮಾರ್ಚ್ 2020ರವರೆಗೆ (5 ತಿಂಗಳಿಗೆ : 8/12*5ರಂತೆ ರೂ.3.33ಲಕ್ಷಗಳನ್ನು) ರೂ.3.33ಲಕ್ಷಗಳನ್ನು ಒದಗಿಸಬೇಕಾಗುತ್ತದೆ.

ಆದ್ದರಿಂದ ಪ್ರಸ್ತಾವಿಸಿರುವ ರೂ.8.00ಲಕ್ಷಗಳ ಬದಲು ರೂ.3.33ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515–00–196–1–05–300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 20 ವೆಚ್ಚ 6/2021(ಇ) ದಿನಾಂಕ: 16ನೇ ಜನವರಿ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ನಿರ್ವಹಣಾ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ಕಾಲಂ 5ರ ಒಟ್ಟು ರೂ3.33ಲಕ್ಷ (ರೂಪಾಯಿ ಮೂರು ಲಕ್ಷದ ಮೂವತ್ತುರು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು. (ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ–2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

(ರೂ.ಲಕ್ಷಗಳಲ್ಲಿ)

| ಕ್ರಮ ಸಂಖ್ಯೆ | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515–00–196–1–05–300ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು |
|---|---|---|---|---|
| 1 | 2 | 3 | 4 | 5 |
| 1 | ಮೈಸೂರು | 2235-00-101-0-30-103 | 3.33 | 3.33 |
| | ಒಟ್ಟು | | **3.33** | **3.33** |

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

14156 39493

16.1.2021

**<u>ಈ ರೀತಿ ಬಿಡುಗಡೆಗೊಳಿಸಿದ ಅನುದಾನದಲ್ಲಿ ಕಾಲಂ 2ರಡಿ ಕಾರ್ಯಕ್ರಮದ ಲೆಕ್ಕ ಶೀರ್ಷಿಕೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಯವರುಗಳ ಬಾಕಿ ವೇತನ ವೆಚ್ಚವನ್ನು ಸೆಳೆಯಲು ಖಜಾನೆ-2ರಲ್ಲಿ ಲಭ್ಯಪಡಿಸುವಂತೆ ಹೆಚ್.ಆರ್.ಎಂ.ಎಸ್.ಗೆ ಸೂಚಿಸಿದೆ.</u>**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಮೈಸೂರು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಜಿಲ್ಲಾ ಖಜಾನಾಧಿಕಾರಿಗಳು, ಮೈಸೂರು
7. ಆರ್ಥಿಕ ಇಲಾಖೆ ವೆಚ್ಚ 10 ಶಾಖೆ ಕಡತಕ್ಕೆ
8. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ